1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**581/2022**

ಹೆಸರುಃ ಮಹಮ್ಮದ್ ಗೌಸ್ ಚಾಸಾಃ 1

ತಂದೆಃ ಗಫಾರ್ ಸಾಬ್ ಪ್ರಾಸಾ.7

ವಯಸ್ಸುಃ 47 ವರ್ಷ

ಉದ್ಯೋಗಃ ಕೂಲಿ ಕೆಲಸ

ವಾಸ ಸ್ಥಳಃ ಚನ್ನಗಿರಿ

ಸಾಕ್ಷಿಗೆ ದಿನಾಂಕಃ 04-04-2026 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಸುಮಾರು 4-5 ವರ್ಷಗಳ ಹಿಂದೆ ನಾನು ನನ್ನ ಬೈಕಿನಲ್ಲಿ ನಲ್ಲೂರಿಗೆ ಹೋಗುತ್ತಿದ್ದಾಗ ಟ್ರಾಕ್ಟರ್ ಬಂದು ಹಿಂಬದಿಯಿಂದ ನನ್ನ ಬೈಕಿಗೆ ಡಿಕ್ಕಿಪಡಿಸಿರುತ್ತದೆ. ನನ್ನ ಬೈಕಿನ ಹಿಂಬದಿಯಲ್ಲಿ ಕುಳಿತಿದ್ದ ಸಲಿಂ ಎಂಬಾತ ಸದರಿ ಅಪಘಾತದಲ್ಲಿ ಮೃತಪಟ್ಟಿರುತ್ತಾನೆ. ನನಗೂ ಸಹ ಹೊಡೆತ ಬಿದ್ದಿರುತ್ತದೆ. ನಂತರ ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೇನೆ. ನಂತರ ಪೊಲೀಸರು ಆಸ್ಪತ್ರೆಗೆ ಬಂದು ನನ್ನ ಹೇಳಿಕೆಯನ್ನುಪಡೆದಿರುತ್ತಾರೆ.

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಹೇಳಿಕೆಯ ದೂರಾಗಿದ್ದು ಅದನ್ನು ಈಗಾಗಲೇ ನಿಪಿ-21 ಎಂದು ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನುನಿಪಿ-21(ಬಿ) ಎಂದು ಗುರುತಿಸಲಾಯಿತು. ನನ್ನ ಬೈಕಿನ ಸಂಖ್ಯೆಯನ್ನಾಗಲಿ ಮತ್ತು ಅಪಘಾತಪಡಿಸಿದ ಟ್ರಾಕ್ಟರ್ ನ ಸಂಖ್ಯೆ ಮತ್ತು ಸದರಿ ಟ್ರಾಕ್ಟರ್ ನ್ನು ಯಾರು ಚಲಾಯಿಸುತ್ತಿದ್ದರು ಎಂಬ ಬಗ್ಗೆ ನನಗೆ ಹೇಳಲಾಗುವುದಿಲ್ಲ.

ಈಗ ನೋಡುತ್ತಿರುವ ಮತ್ತೊಂದು ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಕೃತ್ಯ ನಡೆದ ಸ್ಥಳದ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ-8 ಎಂದು ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ಸದರಿ ದಾಖಲೆಯಲಿಲಬ ರೆದ ವಿಚಾರ ನನಗೆ ಗೊತ್ತಿಲ್ಲ, ಈಗ ನೋಡುತ್ತಿರುವ ಪೊಟೋದಲ್ಲಿ

ನಾನು ಇದ್ದೇನೆ, ಸದರಿ ಫೋಟೋವನ್ನು ಯಾರು, ಯಾವಾಗ , ಯಾವ ಕಾರಣಕ್ಕಾಗಿ ತೆಗದು ಎಂದು ಹೇಳಲಾಗುವುದಿಲ್ಲ.ಅದನ್ನು ಈಗಾಗಲೇ ನಿಪಿ-9 ಎಂದು ಗುರುತಿಸಲಾಗಿದೆ. ಸದರಿ ನಿಪಿ-9 ಕ್ಕೆ ಪೊಲೀಸರ ಕೋರಿಕೆ ಮೇರೆಗೆ ನಿಂತಿರುತ್ತೇನೆ.

ಈಗ ನೋಡುತ್ತಿರುವ ಮತ್ತೊಂದು ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಯಾವುದು ಎಂದು ನನಗೆ ಗೊತ್ತಿಲ್ಲ ಅದನ್ನು ಈಗಾಗಲೇ ನಿಪಿ-18 ಎಂದು ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-18(ಬಿ) ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಮತ್ತೊಂದು ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಇಂಡಿಮಿನಿಟಿ ಬಾಂಡ್ ಆಗಿದ್ದು ಅದನ್ನು ಈಗಾಗಲೇ ನಿಪಿ-20 ಎಂದು ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-20(ಬಿ) ಎಂದು ಗುರುತಿಸಲಾಯಿತು.ಸದರಿ ದಾಖಲೆಯಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ. ಆರೋಪಿಯನ್ನು ನಾನು ನೋಡಿರುವುದಿಲ್ಲ. ನನ್ನ ಬೈಕಿಗೆ ಅಪಘಾತಪಡಿಸಿದ ಟ್ರಾಕ್ಟರ್ ನ್ನು ನನಗೆ ಗುರುತಿಸಲು ಆಗುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ದೂರು, ಸ್ಥಳ ಪಂಚನಾಮೆ, ನಿಪಿ-18 ಮತ್ತು ಇಂಡಿಮಿನಿಟಿ ಬಾಂಡ್‌ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ದೂರು, ಸ್ಥಳ ಪಂಚನಾಮೆ, ನಿಪಿ-18 ಮತ್ತು ಇಂಡಿಮಿನಿಟಿ ಬಾಂಡ್‌ನ್ನು ನೋಡಲಾಗಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿನಾಂಕಃ 05-8-2021 ರಂದು ಬೆಳಿಗ್ಗೆ 8.45ರ ಸಮಯಕ್ಕೆ ನನ್ನ ಬಾಬ್ತಾದ ಕೆಎ-20/ಇಎ-1642 ನೇ ಬೈಕಿನಲ್ಲಿ ಬಾರ್ ಬೆಂಡಿಂಗ್ ಕೆಲಸಕ್ಕಾಗಿ ಹಿಂಬದಿ ಸವಾರನಾಗಿ ಸಲೀಂನನ್ನು ಕೂರಿಸಿಕೊಂಡು ಚನ್ನಗಿರಿಯಿಂದ ನಲ್ಲೂರು ಗ್ರಾಮಕ್ಕೆ ಹೋಗುತ್ತಿದ್ದಾಗ ದೋಣಿಹಳ್ಳಿ ಗ್ರಾಮದ ಬಳಿ ಮುದಿಗೆರೆ ಗ್ರಾಮದ ಕಡೆಯಿಂದ ಟ್ರಾಕ್ಟರ್ ಚಾಲಕ ತನ್ನ ಟ್ರಾಕ್ಟರ್

ನ್ನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನಮ್ಮ ಬೈಕಿಗೆ ಡಿಕ್ಕಿಪಡಿಸಿದ ಪರಿಣಾಮ ನಾನು ಮತ್ತು ಸಲೀಂ ಬೈಕ್ ಸಮೇತ ನೆಲಕ್ಕೆ ಬಿದಿದ್ದುದ್ದು ಸ್ಥಳೀಯರು ಬಂದು ಉಪಚರಿಸಿದ್ದು ನನಗೆ ಕೈ ಕಾಲುಗಳಿಗೆ ಗಾಯಗಳಾಗಿದ್ದು, ಸಲೀಂನ ತಲೆಗೆ , ಮೈ ಕೈ , ಕಾಲುಗಳಿಗೆ ತೀವ್ರ ಸ್ವರೂಪದ ಪೆಟ್ಟು ಬಿದ್ದು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ ಎಂದರೆ ಸರಿ. ಸದರಿ ಟ್ರ್ಯಾಕ್ಟರ್ ನಂ ಕೆಎ-17/ಟಿಸಿ-9146 ಲಗತ್ತಾದ ಟ್ರಾಲಿಯ ನಂ ಗೊತ್ತಿಲ್ಲ ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ನಿಪಿ-21 ರಂತೆ ಟ್ರ್ಯಾಕ್ಟರ್ ಚಾಲಕನ ವಿರುದ್ದ ಕಾನೂನು ಕ್ರಮ ಕೈಗೊಳ್ಳುವಂತೆ ನನ್ನ ಹೇಳಿಕೆಯ ದೂರನ್ನು ನೀಡಿರುತ್ತೇನೆ ಎಂದರೆ ಸರಿ.

ದಿಃ 07-08-2021 ರಂದು ಪೊಲೀಸರು ನಾನು ತೋರಿಸಿದ ಸ್ಥಳದಲ್ಲಿ ಬೆಳಿಗ್ಗೆ 10.00 ರಿಂದ 11.00 ರವರೆಗೂ ಚಾಸಾ-5 ಮತ್ತು 6 ರವರ ಸಮಕ್ಷಮ ನಿಪಿ-8 ರಂತೆ ಪಂಚನಾಮೆ ಜರುಗಿಸಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯಕ್ಕೆ ನಿಪಿ-9 ರಂತೆ ಪೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ22-09-2021 ರಂದು ಪೊಲೀಸರು ನೀಡಿದ ನೋಟಿಸಿಗೆ ನಿಪಿ-18 ರಂತೆ ಉತ್ತರವನ್ನು ನೀಡಿ ನಾನು ದಾಖಲೆಗಳನ್ನು ಹಾಜರುಪಡಿಸಿ ನಿಪಿ-20 ರಂತೆ ಇಂಡಿಮಿನಿಟಿ ಬಾಂಡ್ ನ್ನು ಹಾಜರುಪಡಿಸಿ ಬೈಕ್ ನ್ನು ನನ್ನ ವಶಕ್ಕೆ ಪಡೆದಿರುತ್ತೇನೆ ಎಂದರೆ ಸರಿ.

ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ಶ್ರೀ ಕೆ ಜಿ ಎಸ್ ವಕೀಲರಿಂದ –.**

ಸದರಿ ಅಪಘಾತ ಯಾವ ಕಾರಣದಿಂದ ಮತ್ತು ಯಾರ ತಪ್ಪಿನಿಂದ ಆಯಿತು ಎಂದು ನನಗೆ ಮಾಹಿತಿ ಇಲ್ಲ ಎಂದರೆಸ ರಿ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)** **ಓ.ಹೇ.ಕೇ. ಸರಿ ಇದೆ.**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**581/2022**

ಹೆಸರುಃ ಸಿದ್ದಪ್ಪ ಚಾಸಾಃ 10

ತಂದೆಃ ಚನ್ನಪ್ಪ ಪ್ರಾಸಾ.1

ವಯಸ್ಸುಃ 42

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಚನ್ನೇಶಪುರ ಗ್ರಾಮ , ಚನ್ನಗಿರಿ ತಾ.

ಸಾಕ್ಷಿಗೆ ದಿನಾಂಕಃ 04-06-2024 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಸಾಕ್ಷಿಯು ಈಗ ವಾಹನ ಬಿಡುಗಡೆ ಪಂಚನಾಮೆಯನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ವಾಹನ ಬಿಡುಗಡೆ ಪಂಚನಾಮೆಯನ್ನು ನಿಶಾನೆ ಪಿ 5 ಎಂದು ಗುರುತಿಸಲಾಗಿದ್ದು , ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ.5 ( ಎ ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ವಾಹನ ಬಿಡುಗಡೆ ಪಂಚನಾಮೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ಬಿಡುಗಡೆಗೊಳಿಸಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ವಾಹನ ಬಿಡುಗಡೆ ಪಂಚನಾಮೆಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ವಾಹನ ಬಿಡುಗಡೆ ಪಂಚನಾಮೆಯನ್ನು ನೋಡಲಾಗಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿನಾಂಕಃ 07.09.2021 ರಂದು ಚನ್ನಗಿರಿ ಠಾಣಾ ಆವರಣದಲ್ಲಿ ಸಂಜೆ 6.30 ಗಂಟೆಯಿಂದ 7.00 ಗಂಟೆಯವರೆಗೆ , ಚಾಸಾ.7 ರವರು ನನ್ನ ಹಾಗೂ ಚಾಸಾ.9 ರವರ ಸಮಕ್ಷಮ , ನಿ.ಪಿ. 5 ರಂತೆ ಪಂಚನಾಮೆಯನ್ನು ಜರುಗಿಸಿದರು ಎಂದರೆ ಸರಿಯಲ್ಲ . ನಿಪಿ.5 ನ್ನು ಜರುಗಿಸುವ ಕಾಲಕ್ಕೆ ನನ್ನ ಜೊತೆ ಚಾಸಾ 7 ಮತ್ತು 9ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ನಿಪಿ.5 ನ್ನು ಜರುಗಿಸುವ ಸಮಯದಲ್ಲಿ ಪೊಲೀಸರು ಚಾಸಾ.7 ರವರು ಪಡೆದ ಮದ್ಯಂತರ ಆದೇಶದ ಮೇರೆಗೆ ಚಾಸಾ.7 ರವರಿಗೆ ಕೆ ಎ 17 ಟಿ ಸಿ 9146 ಮತ್ತು ಕೆ ಎ 17 ಟಿ ಸಿ 9147 ನೊಂದಣಿ ಸಂಖ್ಯೆಯುಳ್ಳ ಟ್ರಾಕ್ಟರ್ ಹಾಗೂ ಟ್ರೈಲರ್ ನ್ನು ಬಿಡುಗಡೆಗೊಳಿಸಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ –.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**